ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ಬಿ.ಪಿ.ಎಲ್ ಕಾರ್ಡ್‌ಗಳ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

507 (489) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಬಿ.ಪಿ.ಎಲ್ ಮತ್ತು ಎ.ಪಿ.ಎಲ್. ಕಾರ್ಡ್‌ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಅನಧಿಕೃತವಾಗಿ ನೀಡಲಾದ ಎಷ್ಟು ಬೊಗಸ್ ಕಾರ್ಡ್‌ಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಬೋಗಸ್ ಕಾರ್ಡ್ ಅನ್ನು ಮಾಡಿಕೊಟ್ಟ ಅಧಿಕಾರಿ/ನೌಕರರ ಮೇಲೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಈ) ಬೋಗಸ್ ಕಾರ್ಡ್‌ಗಳನ್ನು ಪಡೆದುಕೊಂಡ ಫಲಾನುಭವಿಗಳ ಮೇಲೆ ಕೈಗೊಂಡಿರುವ ಕಾನೂನಿನ ಕ್ರಮಗಳೇನು ; (ವಿವರ ನೀಡುವುದು)

(ಉ) ಬೋಗಸ್ ಕಾರ್ಡ್‌ನ್ನು ಮುಟ್ಟುಗೋಲು ಹಾಕಿಕೊಂಡ ಮೇಲೆ ಬಿ.ಪಿ.ಎಲ್ ಕಾರ್ಡುದಾರರಿಗೆ ವಿತರಣೆ ಮಾಡಲು ಅಕ್ಕಿ ಮತ್ತು ಇನ್ನಿತರೆ ಪದಾರ್ಥಗಳಿಗೆ ಮಾಹೆಯಾನ ಎಷ್ಟು ಹಣವನ್ನು ಒದಗಿಸಬೇಕಾಗಿದೆ ; (ಮಾಹಿತಿ ನೀಡುವುದು)

(ಊ) ಅದೇ ರೀತಿ ಬೋಗಸ್ ಕಾರ್ಡ್‌ಗಳಿಂದ ಸರ್ಕಾರಕ್ಕೆ ಮಾಹೆಯಾನ ಉಳಿತಾಯವಾಗುತ್ತಿರುವ ಹಣವೆಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)